ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಮು.ಅ/ಯ.ವ/ಪಿ.ಆರ್/ 09 /2015–16

ಮುಖ್ಯ ಅಭಿಯಂತರರ ಕಛೇರಿ
ಯಲಹಂಕ ವಲಯ ಬೃ.ಬೆಂ.ಮ.ಪಾ.
ಬೆಂಗಳೂರು –92
ದಿನಾಂಕ: 05.04.2016

ತಾಂತ್ರಿಕ ಅನುಮೋದನೆ

ವಿಷಯ: Development and improvements to roads and drains in main and cross roads of ward no-05 (Jakkur) ನ ತಾಂತ್ರಿಕ ಮಂಜೂರಾತಿ ನೀಡುವ ಬಗ್ಗೆ

ಉಲ್ಲೇಖ: ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ: ಬೃ.ಬೆಂ.ಮ.ಪಾ/ ಚೀ.ಇ(ಯ)/ಪಿ.ಆ/85 /15–16
ದಿನಾಂಕ: 15.3.16

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು **2015–16**ನೇ ಸಾಲಿನ 14ನೇ ಹಣಕಾಸು ಆಯೋಗದ ಪಿ–3110 ಅನುದಾನದಡಿಯಲ್ಲಿ ಕೆ.ಪಿ.ಡಬ್ಲ್ಯೂ.ಡಿ ಎಸ್.ಆರ್ ದರಪಟ್ಟಿಯನ್ವಯ ಅನುದಾನದಡಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದ ವಾರ್ಡ್ ಸಂಖ್ಯೆ–05ರಲ್ಲಿ ಮೇಲ್ಕಂಡ ಕಾಮಗಾರಿಯನ್ನು ರೂ. 50.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/2011–12 ದಿನಾಂಕ:30–10–2015ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ 64 ಕ್ರ.ಸಂ 09 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ

ಷರತ್ತುಗಳು:

1. ಅಂದಾಜು ಪಟ್ಟಿ ಮೊತ್ತ ರೂ. 1.00ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
6. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
7. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
8. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ–ಬಿಎಂ–ಬಿಸಿ /WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಮುಖ್ಯ ಅಭಿಯಂತರರು
ಯಲಹಂಕ ವಲಯ
ಬಿ.ಬಿ.ಎಂ.ಪಿ ಬೆಂಗಳೂರು–92

ಪ್ರತಿಯನ್ನು:

1. ಕಾರ್ಯಪಾಲಕ ಅಭಿಯಂತರರು, (ಬ್ಯಾಟರಾಯನಪುರ ವಿಭಾಗ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಗೆ, ಸೂಕ್ತ ಕ್ರಮಕ್ಕಾಗಿ.
2. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
3. ಮುಖ್ಯ ಆರ್ಥಿಕ ಅಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಕಛೇರಿ ಪ್ರತಿ.